# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಪ್ರಭು ಅಂದಾನಪ್ಪ ಕನವಳ್ಳಿ, ಇವರ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ ಇಲ್ಲಿನ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ದಿ:27.8.2015 ರಿಂದ ಅನಧಿಕೃತವಾಗಿ ಕಾರ್ಯನಿರ್ವಹಿಸಿದ್ದು, ಅ ಅವಧಿಯಲ್ಲಿ ಅವರು ನಿರ್ವಹಿಸಿದ ಎಲ್ಲಾ ಕಾಮಗಾರಿಗಳು, ಪಾವತಿಸಿದ ಎಲ್ಲಾ ಬಿಲ್‌ಗಳು ಇನ್ನಿತರ ದಾಖಲೆಗಳ/ ಲೆಕ್ಕ ತಪಾಸಣೆ ನಡೆಸಲು ಅಧಿಕಾರಿಗಳನ್ನು ನಿಯೋಜಿಸುವ ಬಗ್ಗೆ-ಆದೇಶ

ಓದಲಾಗಿದೆ:

| | |
|---|---|
| 1. | ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 218 ಸೇಶಿಕಾ 2014, ದಿನಾಂಕ:25.8.2014. |
| 2 | ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 413 ಸೇಶಿಕಾ 14(ಭಾ) ದಿ:5.10.2016 |

## ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:25.8.2014 ಆದೇಶದಲ್ಲಿ ಧಾರವಾಡ ಸಹಕಾರಿ ಹಾಲು ಒಕ್ಕೂಟ ನಿಯಮಿತ ಸಂಸ್ಥೆಗೆ ಸೇರಿದ ಅಧಿಕಾರಿಯಾದ ಶ್ರೀ ಪ್ರಭು ಅಂದಾನಪ್ಪ ಕನವಳ್ಳಿ ಇವರ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪಡೆದು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ ಇಲ್ಲಿನ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನೇಮಿಸಲಾಗಿತ್ತು.

ಮೇಲಿನ ಆದೇಶದನುಸಾರ ಶ್ರೀ ಪ್ರಭು ಅಂದಾನಪ್ಪ ಕನವಳ್ಳಿ ಇವರ ಗುತ್ತಿಗೆ ಅವಧಿಯು ದಿನಾಂಕ:26.8.2015 ಕ್ಕೆ ಮುಕ್ತಾಯಗೊಂಡಿದ್ದು, ಸದರಿಯವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ ಇಲ್ಲಿನ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಿಂದ ಬಿಡುಗಡೆಗೊಳ್ಳಬೇಕಾಗಿತ್ತು. ಸದರಿಯವರು ಕಾರ್ಯ ವಿಮುಕ್ತಗೊಳ್ಳುವಂತೆ ಸರ್ಕಾರದಿಂದ ಸ್ಪಷ್ಟ ನಿರ್ದೇಶನ ನೀಡಿದ್ದಾಗ್ಯೂ ಸದರಿ ಅಧಿಕಾರಿಯು ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಕರ್ತವ್ಯದಿಂದ ಬಿಡುಗಡೆಗೊಂಡಿರುವುದಿಲ್ಲ. ಇದರಿಂದಾಗಿ ಅವರು ದಿನಾಂಕ:27.8.2015 ರಿಂದ ಅನಧಿಕೃತವಾಗಿ ಕಾರ್ಯನಿರ್ವಹಿಸಿರುತ್ತಾರೆ.

ಶ್ರೀ ಪ್ರಭು ಅಂದಾನಪ್ಪ ಕನವಳ್ಳಿ ಇವರು ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿದ್ದನ್ನು ಗಮನಿಸಿ, ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:5.10.2016 ರ ಅದಿಸೂಚನೆಯಲ್ಲಿ ಸದರಿಯವರ ಸೇವೆಯನ್ನು ಮಾತೃ ಸಂಸ್ಥೆಯಾದ ಧಾರವಾಡ, ಹಾವೇರಿ, ಗದಗ ಮತ್ತು ಉತ್ತರ ಕನ್ನಡ, ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತಕ್ಕೆ ಹಿಂದಿರುಗಿಸಲಾಗಿದೆ. ಅದರಂತೆ ಸದರಿ ಅಧಿಕಾರಿಯು ದಿನಾಂಕ:5.10.2016 ರ ಅಪರಾಹ್ನ ಕಾರ್ಯಪಾಲಕ ಇಂಜಿನಿಯರ್ ಕರ್ತವ್ಯದಿಂದ ಬಿಡುಗಡೆಗೊಂಡಿರುತ್ತಾರೆ.

ಪ್ರಸ್ತುತ ಸದರಿಯವರು ಅನಧಿಕೃತವಾಗಿ ಕಾರ್ಯನಿರ್ವಹಿಸಿದ ಅವಧಿ ದಿನಾಂಕ:27.8.2015 ರಿಂದ 5.10.2016 ರವರಗಿನ ಅವಧಿಯನ್ನು ಕ್ರಮಬದ್ದಗೊಳಿಸುವ ಅನಿವಾರ್ಯತೆ ಉಂಟಾಗಿರುತ್ತದೆ. ಸದರಿಯವರು ಅನಧಿಕೃತವಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ನಿರ್ವಹಿಸಿದ ಕಾಮಗಾರಿಗಳು, ಪಾವತಿಸಿದ ಬಿಲ್‌ಗಳು, ಇನ್ನಿತರ ದಾಖಲೆಗಳನ್ನು ಸೂಕ್ತ ಅಧಿಕಾರಿಗಳಿಂದ ತಪಾಸಣೆ ನಡೆಸಿ ವರದಿ ಪಡೆದು ನಂತರ ದಿನಾಂಕ:27.8.2016 ರಿಂದ 5.10.2016 ರವರಗಿನ ಅವಧಿಯನ್ನು ಕ್ರಮಬದ್ದಗೊಳಿಸುವ ಬಗ್ಗೆ ಪರಿಶೀಲಿಸುವುದು ಸೂಕ್ತವಾಗಿರುತ್ತದೆ. ಆದ್ದರಿಂದ, ಈ ಉದ್ದೇಶಕ್ಕಾಗಿ ಕರ್ನಾಟಕ ರಾಜ್ಯ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಸೋಮನಾಥ್, ಆರ್ಥಿಕ ನಿಯಂತ್ರಕರು ಮತ್ತು ಶ್ರೀ ಜಿ.ವಿ.ರುದ್ರಮೂರ್ತಿ, ಲೆಕ್ಕ ಪರಿಶೋಧನಾಧಿಕಾರಿ ಇವರನ್ನು ನಿಯೋಜಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

## ಆದೇಶ ಸಂಖ್ಯೆ:ಗ್ರಾಅಪ 413 ಸೇಶಿಕಾ 15 (ಭಾ-1), ಬೆಂಗಳೂರು, ದಿನಾಂಕ:28.10.2016

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಪ್ರಭು ಅಂದಾನಪ್ಪ ಕನವಳ್ಳಿ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ ಇಲ್ಲಿನ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ

ಅನಧಿಕೃತವಾಗಿ ಕಾರ್ಯನಿರ್ವಹಿಸಿರುವ ದಿನಾಂಕ:27.8.2015ರಿಂದ 5.10.2016 ರವರಗಿನ ಅವಧಿಯಲ್ಲಿ ನಿರ್ವಹಿಸಿದ ಕಾಮಗಾರಿಗಳು, ಪಾವತಿಸಿದ ಬಿಲ್‌ಗಳು ಹಾಗೂ ಇನ್ನಿತರ ದಾಖಲೆ/ಲೆಕ್ಕಪತ್ರಗಳನ್ನು ತಪಾಸಣೆ ನಡೆಸಿ ವರದಿ ಸಲ್ಲಿಸಲು ಈ ಕೆಳಕಂಡ ಅಧಿಕಾರಿಗಳನ್ನು ನಿಯೋಜಿಸಿದೆ.

1. ಶ್ರೀ ಸೋಮನಾಥ್, ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣಾ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
2. ಶ್ರೀ ಜಿ.ವಿ.ರುದ್ರಮೂರ್ತಿ, ಲೆಕ್ಕಪರಿಶೋಧನಾಧಿಕಾರಿ, ಕರ್ನಾಟಕ ಗ್ರಾಮೀಣಾ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

ನಿಯೋಜಿತ ತಪಾಸಣಾಧಿಕಾರಿಗಳಿಗೆ ಅಗತ್ಯ ಸಹಾಯ/ ಸಹಕಾರ ನೀಡಲು ಅಗತ್ಯ ದಾಖಲೆಗಳನ್ನು ತಪಾಸಣೆಗೆ ಒದಗಿಸಲು ಪಂಚಾಯತ್ ರಾಜ್ ಇಂಜಿನಿಯರ್ ವಿಭಾಗ, ಧಾರವಾಡ ಕಛೇರಿಯ ಕಾರ್ಯಪಾಲಕ ಇಂಜಿನಿಯರ್ ಹಾಗೂ ಅವರ ಸಿಬ್ಬಂದಿಗಳಿಗೆ ಸೂಚಿಸಿದೆ.

ನಿಯೋಜಿತ ಅಧಿಕಾರಿಗಳು ಒಂದು ತಿಂಗಳೊಳಗೆ ತಪಾಸಣೆಯನ್ನು ಪೂರ್ಣಗೊಳಿಸಿ, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸಹ ಸೂಚಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೂಜಾರಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ.
4. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮಿಣಾ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ,
6. ಶ್ರೀ ಸೋಮನಾಥ್, ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣಾ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಶ್ರೀ ಜಿ.ವಿ.ರುದ್ರಮೂರ್ತಿ, ಲೆಕ್ಕಪರಿಶೋಧನಾಧಿಕಾರಿ, ಕರ್ನಾಟಕ ಗ್ರಾಮೀಣಾ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
8. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
9. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಜಂಟಿಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.